ವಿಷಯ :– ದಕ್ಷಿಣ ಕನ್ನಡ ಜಿಲ್ಲೆ ಮಂಗಳೂರು ತಾಲ್ಲೂಕಿನಲ್ಲಿ ವಿಧವಾ ಮಾಶಾಸನ ವಿತರಣೆ.

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ 695 (1048)

ಶ್ರೀ ಬಿ. ಎಂ. ಇದಿನಬ್ಬ (ಉಳ್ಳಾಲ) :– ಮಾನ್ಯ ಕಂದಾಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ ?

ಅ) ಮಂಗಳೂರು ತಾಲ್ಲೂಕಿನಲ್ಲಿ ವಿಧವಾ ಮಾಶಾಸನ, ವೃದ್ಧಾಪ್ಯ ವೇತನ, ಅಂಗವಿಕಲರ ವೇತನ 1987-88, 1988-89, 1989-90ರಲ್ಲಿ ಎಷ್ಟು ಜನರಿಗೆ ಕೊಡಲಾಗಿದೆ. (ಪ್ರತ್ಯಪ್ರತ್ಯೇಕ ವಿವರ ನೀಡುವುದು)

ಆ) ಇನ್ನು ಕೊಡಲು ಬಾಕಿ ಇರುವ ಅರ್ಜಿಗಳೆಷ್ಟು ?

ಇ) ಇದರ ವಿಲೇವಾರಿ ಯಾವಾಗ ಪೂರ್ಣಗೊಳ್ಳುತ್ತದೆ ?

ಶ್ರೀ ಎಂ. ಮಲ್ಲಿಕಾರ್ಜುನ ಖರ್ಗೆ (ಕಂದಾಯ ಸಚಿವರು) :–

ಅ) ಮಾಶಾಸನ ನೀಡಿರುವ ವರ್ಷವಾರು ವಿವರಣೆಗಳು :–

| ವರ್ಷ | ವೃದ್ಧಾಪ್ಯ ವೇತನ | ಅಂಗವಿಕಲರ ವೇತನ | ವಿಧವಾ ಮಾಶಾಸನ |
|---|---|---|---|
| 1987–88 | 76 | 64 | 819 |
| 1988–89 | 185 | 166 | 868 |
| 1989–90 | 78 | 85 | 259 |

ಆ) ವೃದ್ಧಾಪ್ಯ ವೇತನ 43
ಅಂಗವಿಕಲರ ವೇತನ 77
ವಿಧವಾ ಮಾಶಾಸನ 35

ಇ) ಬಾಕಿ ಇರುವ ಎಲ್ಲಾ ಅರ್ಜಿಗಳನ್ನು ಆದಷ್ಟು ಬೇಗ ವಿಲೇವಾರಿ ಮಾಡಲು ಸಂಬಂಧಪಟ್ಟ ಅಧಿಕಾರಿಗಳಿಗೆ ಈಗಾಗಲೇ ಸೂಚಿಸಲಾಗಿದೆ.

ವಿಷಯ : ಕನ್ನಡ ವೃತ್ತಿರಂಗ ಭೂಮಿಯನ್ನು ಪುನರುಜ್ಜೀವನಗೊಳಿಸುವುದು.

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ 697 (1074)

ಶ್ರೀ ವಾಟಾಳ್ ನಾಗರಾಜ್ :– (ಚಾಮರಾಜನಗರ) :– ಮಾನ್ಯ ಯುವಜನ ಸೇವಾ ಕ್ರೀಡಾ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ ?

ಅ) ನಶಿಸಿ ಹೋಗುತ್ತಿರುವ ಕನ್ನಡ ವೃತ್ತಿ ರಂಗಭೂಮಿಯನ್ನು ಪುನರುಜ್ಜೀವನ ಗೊಳಿಸಲು ಸರ್ಕಾರ ನಿರ್ಧರಿಸಿದೆಯೆ ?

ಆ) ಕನ್ನಡ ಚಲನ ಚಿತ್ರಗಳಿಗೆ ನೀಡುತ್ತಿರುವಂತೆ ವೃತ್ತಿ ರಂಗಭೂಮಿ ಬೆಳವಣಿಗೆ ಹಿತದೃಷ್ಟಿಯಿಂದ ಪ್ರತಿ ದುಡಿದ ನಾಟಕ ಕಂಪನಿಗಳಿಗೆ ತಲಾ 5ಲಕ್ಷ ರೂ.ಗಳಂತೆ ಸಹಾಯ ಧನ ಕೊಡುವ ಬಗ್ಗೆ ಯೋಚಿಸಲಾಗಿದೆಯೇ

ಇ) ವೃತ್ತಿ ರಂಗಭೂಮಿಯ ಸಮಗ್ರ ನಟನಟಿಯರಿಗೆ ಒಂದೇ ಸಾರಿ ಮಾಶಾಸನವನ್ನು ಸರಕಾರ ನೀಡಬಾರದೇಕೆ ?

ಈ) ಪ್ರತಿ ತಾಲ್ಲೂಕಿಗೂ ಒಂದೊಂದು ಸುಸಜ್ಜಿತ ರಂಗಮಂದಿರವನ್ನು ಕಟ್ಟಿಸಲು ಸರ್ಕಾರ ನಿರ್ಧಾರ ಕೈಗೊಳ್ಳಲಿದೆಯೇ ?

ಶ್ರೀ ಎಸ್. ರಮೇಶ್ (ವಾರ್ತಾ, ಪ್ರವಾಸೋದ್ಯಮ ಮತ್ತು ಯುವಜನ ಸೇವಾ ಸಚಿವರು) :-

ಅ) ಪರಿಶೀಲನೆಯಲ್ಲಿದೆ.

ಆ) ಇಲ್ಲ.

ಇ) ಇದು ಸಾಧ್ಯವಿಲ್ಲ.

ಈ) ಬಯಲು ರಂಗಮಂದಿರ ಯೋಜನೆ ಇದೆ.

ವಿಷಯ :- ಮುಜರಾಯಿ ದೇವಸ್ಥಾನಗಳ ಅರ್ಚಕರುಗಳಿಗೆ ಸಂಬಳವನ್ನು ಜಾಸ್ತಿ ಮಾಡುವ ಬಗ್ಗೆ.

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ 698 (1076)

ಶ್ರೀ ವಾಟಾಳ್ ನಾಗರಾಜ್ (ಚಾಮರಾಜನಗರ) :- ಮಾನ್ಯ ಕಂದಾಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ತಿಳಿಸುವರೆ ?

ಅ) ಮುಜರಾಯಿ ದೇವಸ್ಥಾನಗಳ ಅರ್ಚಕರುಗಳಿಗೆ ಸಂಬಳವನ್ನು ಜಾಸ್ತಿ ಮಾಡಲು ಸರ್ಕಾರ ಯೋಜಿಸಿದೆಯೇ ?

ಆ) ಆ ರೀತಿ ಜಾಸ್ತಿ ಮಾಡುವುದಾದರೆ ಯಾವಾಗ ಜಾಸ್ತಿ ಮಾಡಲಾಗುವುದು ?

ಶ್ರೀ ಎಂ. ಮಲ್ಲಿಕಾರ್ಜುನ ಖರ್ಗೆ (ಕಂದಾಯ ಸಚಿವರು) :-

ಅ) ಇಲ್ಲ.

ಆ) ಉದ್ಭವಿಸುವುದಿಲ್ಲ

ವಿಷಯ :- ಶಿಗ್ಗಾಂವ ನಗರದಲ್ಲಿ ಹೊಸದಾಗಿ ಬಸ್ ನಿಲ್ದಾಣದ ಸ್ಥಾಪನೆ.

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ 701 (933)

ಶ್ರೀ ಮಂಜುನಾಥ ಚೆನ್ನಪ್ಪ ಕುನ್ನೂರ (ಶಿಗ್ಗಾಂವ) :- ಮಾನ್ಯ ಸಾರಿಗೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ ?

ಅ) ಶಿಗ್ಗಾಂವ ನಗರದಲ್ಲಿ ಹೊಸದಾಗಿ ಬಸ್ ನಿಲ್ದಾಣವನ್ನು ನಿರ್ಮಿಸುವ ಬಗ್ಗೆ ಸರ್ಕಾರದ ಮನವಿಗಳೇನಾದರೂ ಬಂದಿದೆಯೇ ? ಹಾಗಿದ್ದಲ್ಲಿ ಈ ಬಗ್ಗೆ ಕೈಕೊಂಡ ಕ್ರಮಗಳೇನು ?

ಆ) ಹಾಗಿದ್ದಲ್ಲಿ, ಇನ್ನು ಎಷ್ಟು ದಿವಸಗಳಲ್ಲಿ ಬಸ್ ನಿಲ್ದಾಣ ಸ್ಥಾಪಿಸಲಾಗುವುದು ?

ಶ್ರೀ ಅಜೀಜ್ ಸೇಠ್ (ಸಾರಿಗೆ ಸಚಿವರು) :

ಅ) ಹೌದು. ಜಮೀನನ್ನು ಸ್ವಾಧೀನಪಡಿಸಿಕೊಳ್ಳಲು ಜಿಲ್ಲಾಧಿಕಾರಿಗಳಿಗೆ ಪ್ರಸ್ತಾವನೆ ಕಳುಹಿಸಲಾಗಿದೆ.

ಆ) ನಿವೇಶನ ಹಸ್ತಾಂತರವಾದ ಮೇಲೆ ಮುಂದಿನ ಕ್ರಮ ಕೈಗೊಳ್ಳಲಾಗುವುದು.

ವಿಷಯ :- ಸವಣೂರು ತಾಲ್ಲೂಕ ನದಿನೀರಲಗಿ ಗ್ರಾಮಕ್ಕೆ ಸಾರಿಗೆ ಸೌಕರ್ಯ.

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ 702 (932)

ಶ್ರೀ ಮಂಜುನಾಥ ಸಿ. ಕುನ್ನೂರು (ಶಿಗ್ಗಾಂವ) :- ಮಾನ್ಯ ಸಾರಿಗೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ ?

ಅ) ಸವಣೂರು ತಾಲ್ಲೂಕು ನದಿನೀರಲಗಿ ಗ್ರಾಮಕ್ಕೆ ಬಸ್ ಸಂಚಾರ ಪ್ರಾರಂಭ ಮಾಡುವ ಸರ್ಕಾರದ ಉದ್ದೇಶವೇನಾದರೂ ಇದೆಯೇ ?

ಆ) ಹಾಗಿದ್ದಲ್ಲಿ, ಇನ್ನು ಎಷ್ಟು ದಿವಸಗಳಲ್ಲಿ ಬಸ್ ಸಂಚಾರ ಪ್ರಾರಂಭ ಮಾಡಲಾಗುವುದು ?

ಶ್ರೀ ಅಜೀಜ್ ಸೇಠ್ (ಸಾರಿಗೆ ಸಚಿವರು) :-

ಅ) ನೆತ್ತು ಆ) ದಿ. 2-12-90 ರಿಂದ ನದಿನೀರಲಗಿ ಗ್ರಾಮಕ್ಕೆ ಬಸ್ ಸಂಚಾರ ಪ್ರಾರಂಭಿಸಲಾಗಿದೆ.